# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1478 (1794)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ರಾಜ್ಯದಲ್ಲಿ ಪ್ರಧಾನಮಂತ್ರಿ ಫಸಲ್ ಭೀಮಾ ಯೊಜನೆಯ ಕುರಿತು

(ಅ) ಕಳೆದ ಐದು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ರೈತರು ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ ವಿಮಾ ಕಂತುಗಳನ್ನು ತುಂಬಿದ್ದಾರೆ ಮತ್ತು ಎಷ್ಟು ಮೊತ್ತವನ್ನು ಪಾವತಿಸಿದ್ದಾರೆ; ರಾಜ್ಯದಲ್ಲಿ ಎಷ್ಟು ವಿಮಾ ಕಂಪನಿಗಳು ಕಾರ್ಯನಿರ್ವಹಿಸುತ್ತಿವೆ ; (ಮಾಹಿತಿ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ತೀವ್ರ ನೆರೆ ಹಾವಳಿ ಮತ್ತು ಅಕಾಲಿಕ ಮಳೆಯಿಂದ ಸಂಪೂರ್ಣ ಬೆಳೆ ನಾಶವಾಗಿರುವ ಒಟ್ಟು ರೈತರ ಸಂಖ್ಯೆ ಎಷ್ಟು; ಎಷ್ಟು ರೈತರು ಬೆಳೆನಾಶದ ವಿಮೆಗಾಗಿ ಅರ್ಜಿ ಸಲ್ಲಿಸಿರುತ್ತಾರೆ ಮತ್ತು ಎಷ್ಟು ಸಂಖ್ಯೆಯ ರೈತರು ಸರ್ಕಾರದ ಸರ್ವೇಕ್ಷಣ/ರೈತರ ಸ್ವಯಂ ಅಧಾರದ ಮೇಲೆ ಅರ್ಹರಾಗಿರುತ್ತಾರೆ; ಬೆಳೆ ಹಾನಿಯಾಗಿರುವ ಎಷ್ಟು ರೈತರಿಗೆ ವಿಮೆಯ ಹಣ ಪಾವತಿಯಾಗಿದೆ; ಎಷ್ಟು ರೈತರಿಗೆ ಬಾಕಿ ವಿಮಾ ಹಣ ಬರಬೇಕಾಗಿದೆ; ಕೇಂದ್ರ ಸರ್ಕಾರದ ವತಿಯಿಂದ ಬರಬೇಕಾದ ವಿಮೆ ಹಣದ ಮೊತ್ತವೆಷು;್ಟ ಕೇಂದ್ರ ಸರ್ಕಾರದ ವತಿಯಿಂದ ಬಿಡುಗಡೆಯಾದ ವಿಮೆ ಹಣ ಮೊತ್ತ ಎಷ್ಟು; ಬಾಕಿ ಬರಬೇಕಾದ ಮೊತ್ತವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ವರ್ಷಾವಾರು ಮಾಹಿತಿ ನೀಡುವುದು)

(ಇ) ವಿಮೆ ಕಂತು ಪಾವತಿಸಿದ್ದರೂ ಸಹ ತಾವು ಬೆಳೆದ ಬೆಳೆಯು ನಾಶವಾಗಿ ಸರ್ಕಾರದಿಂದ ಬರತಕ್ಕಂತಹ ವಿಮೆಗಾಗಿ ಅರ್ಜಿ ಸಲ್ಲಿಸಿದ್ದರೂ ಸಹ ಹಲವು ರೈತರಿಗೆ ವಿಮೆ ಪರಿಹಾರ ದೊರಕದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಈ) ವಿಮೆ ಕಂತು ಸರಿಯಾಗಿ ಪಾವತಿಯಾಗದಿರುವ ಕುರಿತು ಖಾಸಗಿ ವಿಮಾ ಕಂಪನಿಗಳ ಮತ್ತು ಸರ್ಕಾರದ ವಿರುದ್ಧ ಯಾವುದಾದರೂ ನ್ಯಾಯಾಲಯದಲ್ಲಿ ದಾವೆಗಳು ಹೂಡಲ್ಪಟ್ಟಿವೆಯೇ ? (ವಿವರ ನೀಡುವುದು)